# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1053 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 17/03/2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಐಟಿಐ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು? | ಸಿಂಧನೂರಿನಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸಲು ಕೋರಿಕೆ ಇರುತ್ತದೆ.<br><br>ಪ್ರಸ್ತುತ ಸಿಂಧನೂರಿನಲ್ಲಿ 1 ಖಾಸಗಿ ಅನುದಾನಿತ ಮತ್ತು 2 ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಅಲ್ಲದೇ ಸಿಂಧನೂರಿನಿಂದ 25 ಕಿ.ಮಿ ದೂರದಲ್ಲಿರುವ ಮಾನ್ವಿಯಲ್ಲಿ 1 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.<br><br>ರಾಜ್ಯದಲ್ಲಿ ಪ್ರಸ್ತುತ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ, 2014-15ನೇ ಸಾಲಿನಲ್ಲಿ 100 ಹಾಗೂ 2017-18ನೇ ಸಾಲಿನಲ್ಲಿ 12 ಹೊಸ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಿದ್ದು, ಈ ಸಂಸ್ಥೆಗಳಿಗೆ ಮೂಲಭೂತ ಸೌಲಭ್ಯಗಳಾದ ಕಟ್ಟಡ, ಯಂತ್ರೋಪಕರಣಗಳನ್ನು ಒದಗಿಸುವುದು ಮತ್ತು ರಾಜ್ಯದ ಎಲ್ಲಾ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಒದಗಿಸುವುದು ಆದ್ಯತೆಯಾಗಿರುವುದರಿಂದ ಪ್ರಸ್ತುತ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ. |

**ಸಂಖ್ಯೆ: ಕೌಉಜೀಇ 39 ಕೈತಪ್ರ 2025**

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.